ರಾಜ್ಯದ ಅಂಗನವಾಡಿ ಮಕ್ಕಳಿಗೆ ಉಚಿತ ಹಾಲು ಸರಬರಾಜು ಮಾಡುವ ಬಗ್ಗೆ

4236 (4847) : ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ವಿವಿಧ ಅಂಗನವಾಡಿಗಳಲ್ಲಿರತಕ್ಕ ಮಕ್ಕಳ ಸಂಖ್ಯೆ ಎಷ್ಟು;

ಆ) ರಾಜ್ಯದಲ್ಲಿ ಹಾಲಿನ ಉತ್ಪಾದನೆ ಅಧಿಕವಾಗಿದ್ದು, ಈ ಅಂಗನವಾಡಿ ಮಕ್ಕಳಿಗೆ ಉಚಿತ ಹಾಲನ್ನು ಸರಬರಾಜು ಮಾಡಲು ಸರ್ಕಾರ ನಿರ್ಧರಿಸಿದೆಯೇ?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) 27.17 ಲಕ್ಷ

ಆ) ಹಂತಹಂತವಾಗಿ ಅಂಗನವಾಡಿ ಮಕ್ಕಳಿಗೆ ಉಚಿತ ಹಾಲನ್ನು ಸರಬರಾಜು ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಬೆಂಗಳೂರು ನಗರದಲ್ಲಿ ಸ್ತ್ರೀಶಕ್ತಿ ಯೋಜನೆ ಜಾರಿಗೊಳಿಸುವುದರ ಬಗ್ಗೆ

4237 (4853) : ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರ ಪ್ರದೇಶಗಳಲ್ಲಿರುವ ಕಡು ಬಡ ಮಹಿಳೆಯರವನ್ನು ಆರ್ಥಿಕವಾಗಿ ಬಲಪಡಿಸಲು ಸ್ತ್ರೀಶಕ್ತಿ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆಯೇ?

ಆ) ಹಾಗಿದ್ದಲ್ಲಿ ಬೆಂಗಳೂರು ನಗರದಲ್ಲಿ ಎಷ್ಟು ಸ್ತ್ರೀಶಕ್ತಿ ಗುಂಪುಗಳನ್ನು ರಚಿಸಲಾಗಿದೆ.

ಇ) ಇದಕ್ಕಾಗಿ ಸರ್ಕಾರ ಖರ್ಚು ಮಾಡುವ ಹಣವೆಷ್ಟು? ವಿವರ ಒದಗಿಸುವುದು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಇಲ್ಲ. ಆದಾಗ್ಯೂ ನಗರಾಭಿವೃದ್ಧಿ ಇಲಾಖೆಯು ನಗರ ಪ್ರದೇಸಗಳಲ್ಲಿ ಸ್ತ್ರೀಶಕ್ತಿ ಯೋಜನೆಯನ್ನು ಪ್ರಾರಂಭಿಸುವುದನ್ನು ಪರಿಶೀಲಿಸುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಳಗಾವಿ ಜಿಲ್ಲೆಯಲ್ಲಿ ಗೋದಾಮು ಕಛೇರಿ ಕಟ್ಟಡ ನಿರ್ಮಾಣದ ಬಗ್ಗೆ

4238 (4899) : ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಕಾಡಾ ಕಚೇರಿಯಿಂದ ಈ ವರ್ಷ ರೈತರಿಗೆ ಮಾಲು ಸಂಗ್ರಹಣೆ ಮಡಲು ಎಷ್ಟು ಗೋದಾಮು ಕಂ-ಕಚೇರಿಗಳನ್ನು ಕಟ್ಟಲು ಉದ್ದೇಶಿಸಲಾಗಿದೆ?

ಆ) ಕಳೆದ ವರ್ಷ ಹಾಗೂ ಈ ವರ್ಷ ಎಷ್ಟು ಗೋದಾಮು-ಕಂ-ಕಚೇರಿ ಗಳನ್ನು ಕಟ್ಟಲಾಗಿದೆ: ಹಾಗೂ ಯವ ಯಾವ ಸ್ಥಳಗಳಲ್ಲಿ ಕಟ್ಟಲಾಗಿದೆ?

ಇ) ಬೈಲಹೊಂಗಲ ತಾಲ್ಲೂಕಿನ ಅನಿಗೋಳ ಗ್ರಾಮದಲ್ಲಿ ಗೋದಾಮು-ಕಂ-ಕಚೇರಿ ಕಟ್ಟಲು ಪ್ರಸ್ತಾವನೆ ಕಳುಹಿಸಿದ್ದರೂ ಕೂಡಾ ಇದುವರೆಗೂ ಮಂಜೂರಾತಿ ನೀಡದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?